**ಕರ್ನಾಟಕ ಸರ್ಕಾರ**

ಸಂಖ್ಯೆ: ಆಇ 08 ಸೇನಿಸೇ 2018

ಕರ್ನಾಟಕ ಸರ್ಕಾರ ಸಚಿವಾಲಯ,
ಆರ್ಥಿಕ ಇಲಾಖೆ, ವಿಧಾನಸೌಧ,
ಬೆಂಗಳೂರು, ದಿನಾಂಕ: 06/10/2018

**ಸುತ್ತೋಲೆ**

ವಿಷಯ: ಪ್ರಭಾರ ಭತ್ಯೆ ಮಂಜೂರಾತಿ ಬಗ್ಗೆ ಸ್ಪಷ್ಟೀಕರಣ.

ಉಲ್ಲೇಖ:
1. **ಸರ್ಕಾರದ ಆದೇಶ ಸಂಖ್ಯೆ: ಆಇ 3 ಸೇನಿಸೇ 2012, ದಿನಾಂಕ: 14/06/2012**
2. **ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 06 ಎಸ್‌ಆರ್‌ಪಿ 2018, ದಿನಾಂಕ: 01/03/2018**

*******

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 32 ಮತ್ತು 68 ರಡಿಯಲ್ಲಿ ಸರ್ಕಾರಿ ನೌಕರರನ್ನು ಸ್ವತಂತ್ರ ಪ್ರಭಾರದಲ್ಲಾಗಲೀ ಅಥವಾ ತಮ್ಮ ಹುದ್ದೆಯ ಕರ್ತವ್ಯದ ಜೊತೆ ಬೇರೊಂದು ಹುದ್ದೆಯ ಹೆಚ್ಚಿನ ಪ್ರಭಾರದಲ್ಲಿರಿಸಿದಾಗ ಆ ಹುದ್ದೆಯ ವೇತನಶ್ರೇಣಿಯ ಕನಿಷ್ಟ ಹಂತದ ಶೇಕಡ 7.5ರಷ್ಟನ್ನು ಪ್ರಭಾರ ಭತ್ಯೆಯನ್ನಾಗಿ ನೀಡುವಲ್ಲಿ ದಿನಾಂಕ:01/04/2012ರಿಂದ ಜಾರಿಗೊಳಿಸಿ ಉಲ್ಲೇಖಿತ(1)ರ ಆದೇಶದಲ್ಲಿ ಅವಕಾಶ ಕಲ್ಪಿಸಿದೆ.

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 32 ಮತ್ತು 68 ರಡಿಯಲ್ಲಿ ಮಾಡಲಾಗುವ ಪ್ರಭಾರ ವ್ಯವಸ್ಥೆಗಳಿಗೆ ಸಂಬಂಧಿಸಿದಂತೆ, ನಿಯಮ 68 ರಡಿಯಲ್ಲಿ ನೀಡಲಾಗುವ ಪ್ರಭಾರ ಭತ್ಯೆಯನ್ನು 2018ರ ಪರಿಷ್ಕೃತ ವೇತನ ಶ್ರೇಣಿಯಲ್ಲಿ ಅನ್ವಯಿಸಿ ಮಂಜೂರು ಮಾಡುವ ದಿನಾಂಕದ ಬಗ್ಗೆ ಆಡಳಿತ ಇಲಾಖೆಗಳಿಂದ ಸ್ಪಷ್ಟೀಕರಣ ಕೋರಲಾಗುತ್ತಿದೆ.

ಪ್ರಸ್ತುತ 6ನೇ ವೇತನ ಆಯೋಗದ ಶಿಫಾರಸ್ಸಿನಂತೆ ಜಾರಿಗೆ ಬಂದಿರುವ 2018ರ ಪರಿಷ್ಕೃತ ವೇತನ ಶ್ರೇಣಿಗಳು ದಿನಾಂಕ:01.07.2017 ರಿಂದ ಕಾಲ್ಪನಿಕವಾಗಿ ಜಾರಿಗೆ ಬಂದಿದ್ದು, ಪರಿಷ್ಕೃತ ವೇತನ ಶ್ರೇಣಿಗಳ ಪರಿಷ್ಕರಣೆಯ ಆರ್ಥಿಕ ಸೌಲಭ್ಯವು ದಿನಾಂಕ: 01/04/2018 ರಿಂದ ಲಭ್ಯವಾಗುತ್ತದೆ. ಪ್ರಭಾರ ಭತ್ಯೆ ದರದ ಕುರಿತಂತೆ ಪ್ರಸ್ತುತ ಚಾಲ್ತಿಯಲ್ಲಿರುವ ಮೂಲ ವೇತನದ ಶೇ.7.5ರ ದರವನ್ನೇ ಪ್ರಭಾರ ಭತ್ಯೆಯಾಗಿ ಮುಂದುವರೆಸುವ ಕುರಿತಂತೆ ಆರನೇ ರಾಜ್ಯ ವೇತನ ಆಯೋಗವು ಮಾಡಿರುವ ಶಿಫಾರಸ್ಸುಗಳನ್ನು ಒಪ್ಪಿಕೊಳ್ಳಲಾಗಿದೆ ಮತ್ತು ಈ ಸಂಬಂಧ ಪ್ರತ್ಯೇಕ ಆದೇಶ/ನಿಯಮಗಳನ್ನು ಹೊರಡಿಸಲಾಗುವುದೆಂದು ಉಲ್ಲೇಖಿತ (2)ರ ಆದೇಶದಲ್ಲಿ ತಿಳಿಸಲಾಗಿದೆ.

ಪ್ರಸ್ತುತ 6ನೇ ವೇತನ ಆಯೋಗದ ಶಿಫಾರಸ್ಸಿನಂತೆ ಜಾರಿಗೆ ಬಂದಿರುವ 2018ರ ಪರಿಷ್ಕೃತ ವೇತನ ಶ್ರೇಣಿಗಳು ದಿನಾಂಕ: 01.07.2017 ರಿಂದ ಅನ್ವಯಿಸಿ ಕಾಲ್ಪನಿಕವಾಗಿ ಜಾರಿಗೊಳಿಸಿದ್ದು, ಈ ಪರಿಷ್ಕೃತ ವೇತನ ಶ್ರೇಣಿಗಳ ಪರಿಷ್ಕರಣೆಯ ಸಂವಾದಿಯ ಆರ್ಥಿಕ ಸೌಲಭ್ಯವು ದಿನಾಂಕ:01/04/2018 ರಿಂದ ಲಭ್ಯವಾಗುತ್ತದೆ. ಈ ಹಿನ್ನೆಲೆಯಲ್ಲಿ 2018ರ ಪರಿಷ್ಕೃತ ವೇತನ ಶ್ರೇಣಿಗಳ ಆರ್ಥಿಕ ಸೌಲಭ್ಯವು ದಿನಾಂಕ:01/04/2018ರಿಂದ ಜಾರಿಗೆ ಬಂದಿರುವುದರಿಂದ ದಿನಾಂಕ:01/07/2017 ರಿಂದ ದಿನಾಂಕ:31/03/2018ರವರೆಗಿನ ಅವಧಿಯಲ್ಲಿನ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 32 ಮತ್ತು 68 ರಡಿಯಲ್ಲಿ ಮಾಡಲಾಗುವ ಪ್ರಭಾರ ವ್ಯವಸ್ಥೆಗಳಿಗೆ ಸಂಬಂಧಿಸಿದಂತೆ, ಪ್ರಭಾರ ಭತ್ಯೆಯನ್ನು ಪೂರ್ವ ಪರಿಷ್ಕೃತ ವೇತನ ಶ್ರೇಣಿ 2012ರ ಸಂವಾದಿ ಅಂದರೆ 2012ರ ಪರಿಷ್ಕೃತ ವೇತನ ಶ್ರೇಣಿಗನುಸಾರವಾಗಿ ಪಾವತಿಸತಕ್ಕದ್ದು. ಹಾಗೂ ದಿನಾಂಕ:01/04/2018 ಮತ್ತು ನಂತರದಲ್ಲಿನ ಅವಧಿಯಲ್ಲಿ ಮಾಡಲಾದ ಮತ್ತು ಮುಂದುವರೆದ ಪ್ರಭಾರ ವ್ಯವಸ್ಥೆ ಪ್ರಕರಣಗಳಲ್ಲಿ ಹುದ್ದೆಗೆ ಅನ್ವಯ ಮಾಡಲಾದ ಪರಿಷ್ಕೃತ ವೇತನ ಶ್ರೇಣಿ 2018ರ ಸಂವಾದಿ ವೇತನ ಶ್ರೇಣಿಯ ಕನಿಷ್ಠ ಮೂಲ ವೇತನದ ಶೇಕಡ 7.5ರಷ್ಟನ್ನು ದಿನಾಂಕ:01/04/2018ರಿಂದ ಅನ್ವಯಿಸಿ ಪಡೆಯಲು ಅರ್ಹರಿರುವುದಾಗಿ ಸ್ಪಷ್ಟೀಕರಿಸಲಾಗಿದೆ.

ಪ್ರಭಾರ ಭತ್ಯೆ ಮಂಜೂರು ಮಾಡಲು ನಿಗದಿಪಡಿಸಿರುವ ಇತರೆ ಷರತ್ತುಗಳು ಮುಂದುವರೆದು ಅನ್ವಯಿಸುತ್ತದೆ.

Suvarna B S.
(ಬಿ.ಎಸ್. ಸುವರ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-1).

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು ಕೋರಿ ಕಳುಹಿಸಿದೆ.

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು/ಅಪರಮುಖ್ಯ ಕಾರ್ಯದರ್ಶಿಗಳು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
3. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
4. ಎಲ್ಲಾ ಜಿಲ್ಲಾಧಿಕಾರಿಗಳು.
5. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಮೈಸೂರು/ಬೆಳಗಾವಿ/ಗುಲ್ಬರ್ಗ.
6. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
7. ಪ್ರಧಾನ ಮಹಾಲೇಖಪಾಲರು (ಸಿವಿಲ್ ಮತ್ತು ವಾಣಿಜ್ಯ ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು.

8. ಮಹಾಲೇಖಪಾಲರು(ಕಂದಾಯ, ಸ್ವೀಕೃತಿ ಮತ್ತು ಕಾಮಗಾರಿಗಳು ಮತ್ತು ಅರಣ್ಯ ಲೆಕ್ಕಪರಿಶೋಧನೆ). ಬೆಂಗಳೂರು
9. ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
10. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂರು.
11. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
12. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
13. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
14. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
15. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.
16. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ/ಜಿಲ್ಲಾ ಖಜಾನೆಗಳು.
17. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
18. ಪ್ರಾಜೆಕ್ಟ್ಆಫೀಸರ್, ಹೆಚ್.ಆರ್.ಎಂ.ಎಸ್, ಕೊಠಡಿ ಸಂಖ್ಯೆ:145–ಎ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
19. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
20. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
21. ಕರ್ನಾಟಕ ಸರ್ಕಾರಿ ಸಚಿವಾಲಯದ ಗ್ರಂಥಾಲಯ; ವಿಧಾನ ಮಂಡಲದ ಗ್ರಂಥಾಲಯ.
22. ವಾರಪತ್ರ/ಶಾಖೆಯ ರಕ್ಷಾ ಕಡತ.

[ಕ್ರಮ ಸಂಖ್ಯೆ:6 ರಿಂದ 18 ರವರೆಗೆ ನಮೂದಿತವಾದ ಅಧಿಕಾರಿಗಳಿಗೆ ಪತ್ರದ ಮೂಲಕ].

ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ WWW.finance.kar.nic.in. ವೀಕ್ಷಿಸಿ.